**Akashvani : Bangalore**
**National Bulletin In Kannada**
**09.02.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

- ದೆಹಲಿಯಲ್ಲಿ ವಿಶ್ವದರ್ಜೆಯ ಮೂಲ ಸೌಕರ್ಯಕ್ಕೆ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ
- ಯುವ ಸಮೂಹ ಪುಸ್ತಕಗಳ ಅಧ್ಯಯನಕ್ಕೆ ಒತ್ತು ನೀಡುವ ಮೂಲಕ ಜ್ಞಾನಾಧಾರಿತ ಮಾರ್ಗ ಕಂಡುಕೊಳ್ಳಬೇಕು- ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕರೆ
- ಮೈಸೂರಿನಲ್ಲಿ ಎಬಿವಿಪಿ ರಾಷ್ಟ್ರೀಯ ಏಕಾತ್ಮತಾ ಯಾತ್ರೆಯಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭಾಗಿ
- ಏಕದಿನ ಕ್ರಿಕೆಟ್; ಇಂದು ಕಟಕ್‌ನಲ್ಲಿ ಭಾರತ - ಇಂಗ್ಲೆಂಡ್ ಮುಖಾಮುಖಿ

**<><*<><>*><>**

ಬಿಜೆಪಿ ನೇತೃತ್ವದ ಡಬಲ್ ಇಂಜಿನ್ ಸರ್ಕಾರಗಳ ಸಾಧನೆಯ ಪ್ರತೀಕವಾಗಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ಗೆಲುವು ಪ್ರಾಪ್ತವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ವಿಜಯೋತ್ಸವದಲ್ಲಿ ಮಾತನಾಡಿದ ಅವರು, ದೆಹಲಿ ನಿಜವಾದ ಮಾಲೀಕರು ದೆಹಲಿಯ ಜನರಿಂದ ಬಿಜೆಪಿಗೆ ಸ್ಪಷ್ಟ ಜನಾದೇಶ ದೊರೆತಿದ್ದು, ದೆಹಲಿಯಲ್ಲಿ ವಿಶ್ವದರ್ಜೆಯ ಮೂಲ ಸೌಕರ್ಯ ಕಲ್ಪಿಸಲಾಗುವುದು. ದೆಹಲಿ ಕೇವಲ ಒಂದು ನಗರವಲ್ಲ ಇದು ಸಣ್ಣ ಭಾರತವಾಗಿದೆ. ಏಕ ಭಾರತ್ ಶ್ರೇಷ್ಠ ಭಾರತ್ ಗೆ ದೆಹಲಿ ನಿದರ್ಶನವಾಗಿದೆ ಎಂದು ಹೇಳಿದರು.

ಧ್ವನಿ; ಪ್ರಧಾನಿ ನರೇಂದ್ರ ಮೋದಿ ( ೨೬ ಸೆಕೆಂಡ್)

**<><*<><>*><>**

ಯುವ ಸಮೂಹ ಪುಸ್ತಕಗಳ ಅಧ್ಯಯನಕ್ಕೆ ಆದ್ಯತೆ ನೀಡುವ ಮೂಲಕ ಜ್ಞಾನಾಧಾರಿತ ಮಾರ್ಗ ಕಂಡುಕೊಳ್ಳಬೇಕು. ಜ್ಞಾನ, ಶಕ್ತಿ ಮತ್ತು ಸ್ಫೂರ್ತಿಗಾಗಿ ಪುಸ್ತಕಗಳತ್ತ ಆಸಕ್ತರಾಗುವಂತೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ವಿಶ್ವ ಪುಸ್ತಕ ಮೇಳ ೨೦೨೫ ರಲ್ಲಿ ಎರಡು ಪುಸ್ತಕಗಳನ್ನು ಲೋಕಾರ್ಪಣೆ ಮಾಡಿ ನಾತನಾಡಿದ ಅವರು, ವೈಯಕ್ತಿಕ ಮತ್ತು ಸಾಮಾಜಿಕ ಬೆಳವಣಿಗೆಯಲ್ಲಿ ಪುಸ್ತಕಗಳು ನಿಜವಾದ ಮಾರ್ಗದರ್ಶಕ ಶಕ್ತಿಯಾಗಿವೆ. ಪುಸ್ತಕಗಳು ಜ್ಞಾನದ ಶಾಶ್ವತ ದಾಖಲೆಗಳಾಗಿವೆ. ಭವಿಷ್ಯದ ಪೀಳಿಗೆಗೆ ವಿಚಾರಗಳು ಮತ್ತು ಪರಂಪರೆಯನ್ನು ಪುಸ್ತಕಗಳು ತಂದಿವೆ ಸಂರಕ್ಷಿಸುತ್ತವೆ. ಸವಾಲುಗಳನ್ನು ನಿವಾರಿಸಲು ಸ್ಫೂರ್ತಿ, ಪ್ರೇರಣೆ ಮತ್ತು ಶಕ್ತಿಯ ಮೂಲವಾಗಿ ಪುಸ್ತಕಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

**<><*<><>*><>**

ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಕಟಿಬದ್ಧವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಮೈಸೂರಿನಲ್ಲಿ ನಿನ್ನೆ ಎಬಿವಿಪಿ ರಾಷ್ಟ್ರೀಯ ಏಕಾತ್ಮಕಾ ಯಾತ್ರೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಈ ರಾಜ್ಯಗಳ ಶ್ರೇಯೋವೃದ್ಧಿಗೆ ಸುಮಾರು ಐದೂವರೆ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ವೆಚ್ಚಮಾಡಲಾಗಿದೆ ಎಂದರು. ಪೂರ್ವದತ್ತ ನೋಡು ನೀತಿ ಅಡಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈಶಾನ್ಯ ರಾಜ್ಯಗಳಾದ ಅಸ್ಸಾಂ, ಅರುಣಾಚಲ ಪ್ರದೇಶ, ಮೇಘಾಲಯ, ಮಣಿಪುರ, ನಾಗಲ್ಯಾಂಡ್, ಸಿಕ್ಕಿಂ, ತ್ರಿಪುರ ಅಭಿವೃದ್ಧಿಗೆ ಕಳೆದ ಎಪ್ಪತ್ತು ವರ್ಷಗಳಲ್ಲಿ ಕಂಡೂ ಕೇಳರಿಯದಷ್ಟು ಅಭಿವೃದ್ಧಿಗೆ ಒತ್ತು ಕೊಡುತ್ತಿದ್ದಾರೆ ಎಂದು ಅವರು ಹೇಳಿದರು. ರಾಷ್ಟ್ರೀಯ ಏಕಾತ್ಮಕಾ ಯಾತ್ರೆ ಅಂಗವಾಗಿ ಹಮ್ಮಿಕೊಂಡಿರುವ ನಾಗರಿಕ ಸ್ವಾಗತ ಕಾರ್ಯಕ್ರಮದ ಬಗ್ಗೆ ಬಹಳಷ್ಟು ಮೆಚ್ಚುಗೆ ವ್ಯಕ್ತಪಡಿಸಿದ ಸಚಿವ ಕುಮಾರಸ್ವಾಮಿ, 'ಏಕ ಭಾರತ ಪರಿಕಲ್ಪನೆ' ಅಡಿಯಲ್ಲಿ ಇಡೀ ದೇಶವನ್ನು ಒಗ್ಗೂಡಿಸಲು ಇದೊಂದು ಅತ್ಯುತ್ತಮ ಕ್ರಮವಾಗಿದೆ, ಇದಕ್ಕಾಗಿ ನಾನು ಎಬಿವಿಪಿ ಸಂಘಟಕರನ್ನು ಅಭಿನಂದಿಸುತ್ತೇನೆ ಎಂದರು.

<><*<><>*><>

ವೈದ್ಯಕೀಯ ಪ್ರಗತಿಯ ಹಿಂದಿನ ಪ್ರೇರಕ ಶಕ್ತಿಯಾಗಿ ಭಾರತ ಗುರುತಿಸಿಕೊಂಡಿದ್ದು, ಈ ಹಿನ್ನೆಲೆಯಲ್ಲಿ ಔಷಧ ಉದ್ಯಮವು ಗುಣಮಟ್ಟ ಮತ್ತು ನಾವೀನ್ಯತೆಗೆ ಆದ್ಯತೆ ನೀಡಬೇಕೆಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಮುಂಬೈನಲ್ಲಿ ನಿನ್ನೆ ನಡೆದ ಭಾರತೀಯ ಔಷಧ ತಯಾರಕರ ಸಂಘದ ೬೩ ನೇ ವಾರ್ಷಿಕ ದಿನಾಚರಣೆ ಉದ್ದೇಶಿಸಿ ಮಾತನಾಡಿದ ಸಚಿವರು. ಭಾರತೀಯ ಔಷಧ ಉದ್ಯಮ ಗಮನಾರ್ಹ ಪ್ರಗತಿ ಸಾಧಿಸಿದ್ದರೂ, ಇನ್ನೂ ಬಹಳ ದೂರ ಮುನ್ನಡೆಯಬೇಕಾಗಿದೆ. ಈ ವಲಯದ ಎಲ್ಲಾ ಕಂಪನಿಗಳು, ದೊಡ್ಡ ಮತ್ತು ಸಣ್ಣ ಎರಡೂ, ದೇಶವನ್ನು ಹೆಮ್ಮೆಪಡಿಸಲು ಒಗ್ಗಟ್ಟಿನ ಘಟಕವಾಗಿ ಒಟ್ಟಾಗಿ ಕೆಲಸ ಮಾಡಬೇಕು ಎಂದು ಅವರು ಒತ್ತಿ ಹೇಳಿದರು. ಇದು ವಲಯದ ಖ್ಯಾತಿಯನ್ನು ಹಾಳು ಮಾಡುತ್ತದೆ. ಸಹಯೋಗದ ಮಹತ್ವವನ್ನು ಎತ್ತಿ ತೋರಿಸುತ್ತಾ, ನಾವೀನ್ಯತೆ ಮತ್ತು ಸಂಶೋಧನೆಯಲ್ಲಿ ಸಾರ್ವಜನಿಕ-ಖಾಸಗಿ ಮತ್ತು ಶೈಕ್ಷಣಿಕ ಪಾಲುದಾರಿಕೆಗಳು ಉದ್ಯಮದ ಭವಿಷ್ಯಕ್ಕೆ ಪ್ರಮುಖವಾಗಿವೆ ಎಂದು ಅವರು ಒತ್ತಿ ಹೇಳಿದರು. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಮಾತನಾಡಿ, ಔಷಧ ವಲಯದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧತೆ ಹೊಂದಿದ್ದು, ದೇಶೀಯ ಉತ್ಪಾದನಾ ಸಾಮರ್ಥ್ಯಗಳನ್ನು ಹೆಚ್ಚಿಸಲು ಹಲವಾರು ಉಪಕ್ರಮಗಳನ್ನು ಕೈಗೊಳ್ಳಲಾಗಿದೆ. ಆಮದು-ಅವಲಂಬಿತ ರಾಷ್ಟ್ರದಿಂದ ಸ್ವಾವಲಂಬಿ ಮತ್ತು ಜಾಗತಿಕವಾಗಿ ಗುರುತಿಸಲ್ಪಟ್ಟ ರಫ್ತುದಾರನಾಗಿ ಭಾರತ ಪ್ರಗತಿ ಸಾಧಿಸಿದೆ ಎಂದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ನಾಳೆ ಬೆಳಗ್ಗೆ ೧೧ ಗಂಟೆಗೆ ಜರುಗಲಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ.

ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ

<><*<><>*><>

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ನಾಳೆಯಿಂದ ಆರಂಭವಾಗಲಿದೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳು ತಾಲೀಮು ನಡೆಸುತ್ತಿವೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆಯಿಂದ ಫಾನ್ಸ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ದೆಹಲಿಯಲ್ಲಿ ತಿಳಿಸಿದ್ದಾರೆ.  ಇದೇ ತಿಂಗಳ ೧೨ ಮತ್ತು ೧೩ ರಂದು ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾಕ್ಕೆ ಭೇಟಿ ನೀಡಲಿದ್ದು, ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<><*<><>*><>

ಭಾರತ ಹಾಗೂ ಇಂಗ್ಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ೨ನೇ ಪಂದ್ಯ ಇಂದು ಕಟಕ್‌ನ ಬಾರಾ ಬಾತಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಮಧ್ಯಾಹ್ನ ೧.೩೦ ಕ್ಕೆ ಆರಂಭವಾಗಲಿದೆ. ನಾಗ್ಪುರದಲ್ಲಿ ನಡೆದ ಮೊದಲ ಏಕದಿನ ಪಂದ್ಯವನ್ನು ನಾಲ್ಕು ವಿಕೆಟ್‌ಗಳಿಂದ ಗೆದ್ದಿರುವ ಭಾರತ, ಸರಣಿ ಕೈವಶ ಮಾಡಿಕೊಳ್ಳುವ ತವಕದಲ್ಲಿದೆ.

<><*<><>*><>

ಉತ್ತರಾಖಂಡನ ಡೆಹರಾಡೋನ್‌ನಲ್ಲಿ ನಡೆಯುತ್ತಿರುವ ೩೮ ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಆತಿಥೇಯ ಉತ್ತರಾಖಂಡದ ಕ್ರೀಡಾಪಟುಗಳು ಪೆಂಟಾತ್ಲಾನ್ ಲೇಸರ್ ರನ್ ವಿಭಾಗದಲ್ಲಿ ೫ ಚಿನ್ನದ ಪದಕ ಗಳಿಸಿದೆ. ಮಹಿಳೆಯರ ಡಿಸ್ಕಸ್ ಎಸೆತದಲ್ಲಿ ಹರಿಯಾಣದ ಸೀಮಾ ಚಿನ್ನ, ಹಾಗೂ ಪುರುಷರ ವಿಭಾಗದಲ್ಲಿ ಸರ್ವಿಸಸ್‌ನ ಗಗನ್‌ದೀಪ್ ಸಿಂಗ್ ಸ್ವರ್ಣ ಪಡೆದಿದ್ದಾರೆ. ಮಹಿಳೆಯರ ಪೋಲ್ ವಾಲ್ಟ್‌ನಲ್ಲಿ ತಮಿಳುನಾಡಿನ ಕ್ರೀಡಾಪಟುಗಳು ಚಿನ್ನ ಹಾಗೂ ಬೆಳ್ಳಿ ಎರಡು ಪದಕಗಳನ್ನು ಗಳಿಸಿದರು. ಉತ್ತರಾಪ್ರದೇಶದ ಶಹಾನ್‌ವಾಸ್ ಪುರುಷರ ಲಾಂಗ್‌ಜಂಪ್‌ನಲ್ಲಿ ಅಗ್ರ ಸ್ಥಾನ ಪಡೆದು ಚಿನ್ನ ಗೆದ್ದರು.

<><*<><>*><>

ಈ ವರ್ಷದ ಫ್ರೀಸ್ಟೈಲ್ ಚೆಸ್ ಗ್ರ್ಯಾಂಡ್ ಸ್ಲ್ಯಾಮ್ ಟೂರ್‌ನ ಐದು ಹಂತದ ಸ್ಪರ್ಧೆಗಳ ಪೈಕಿ ಮೊದಲ ಪಂದ್ಯಕ್ಕೆ ವಿಶ್ವ ಚಾಂಪಿಯನ್ ಭಾರತದ ಡಿ ಗುಕೇಶ್ ನಾಕೌಟ್ ಹಂತಕ್ಕೆ ಅರ್ಹತೆ ಪಡೆದಿದ್ದಾರೆ. ಜರ್ಮನಿಯ ವೈಸೆನ್‌ಹೌಸ್‌ನಲ್ಲಿ ನಡೆದ ಅರ್ಹತಾ ಸುತ್ತಿನ ಒಂಬತ್ತನೇ ಮತ್ತು ಅಂತಿಮ ಸುತ್ತಿನಲ್ಲಿ ವಿಶ್ವದ ಅತ್ಯುನ್ನತ ರೇಟಿಂಗ್ ಪಡೆದ ಆಟಗಾರ ನಾರ್ವೆಯ ಮ್ಯಾಗ್ನಸ್ ಕಾರ್ಲ್‌ಸೆನ್ ವಿರುದ್ಧ ಸೋತರೂ ಗುಕೇಶ್ ಮುಂದಿನ ಹಂತಕ್ಕೆ ಮುನ್ನಡೆದರು. ಗುಕೇಶ್ ಒಂದೇ ಒಂದು ಗೆಲುವು ಸಾಧಿಸದೆ ೩.೫ ಅಂಕಗಳೊಂದಿಗೆ ತನ್ನ ಯಾನ ಪೂರ್ಣಗೊಳಿಸಿದರು. ಏಳು ಪಂದ್ಯಗಳನ್ನು ಡ್ರಾ ಮಾಡಿಕೊಂಡ ಗುಕೇಶ್ ಎರಡು ಪಂದ್ಯಗಳಲ್ಲಿ ಸೋತಿದ್ದರು.

**<><*<><>*><>**

ಪಶ್ಚಿಮ ಹಿಮಾಲಯ, ಬಂಗಾಳ, ಸಿಕ್ಕಿಂ ಮತ್ತು ಒಡಿಶಾದ ಕೆಲವು ಪ್ರದೇಶಗಳಲ್ಲಿ ನಾಳೆಯವರೆಗೆ ಬೆಳಗಿನ ಜಾವ ದಟ್ಟ ಮಂಜು ಮುಸುಕುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಾಯವ್ಯ ಭಾರತದಲ್ಲಿ ಮುಂದಿನ ಐದು ದಿನಗಳ ಕಾಲ ಕನಿಷ್ಠ ತಾಪಮಾನ ೨ ರಿಂದ ೪ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗುವ ನಿರೀಕ್ಷೆಯಿದೆ. ಇದೇ ೧೧ ರಂದು ಅರುಣಾಚಲ ಪ್ರದೇಶ, ಅಸ್ಸಾಂ ಮತ್ತು ಮೇಘಾಲಯದ ಕೆಲವು ಕಡೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಂಭವವಿದೆ ಎಂದು ಇಲಾಖೆ ಮುನ್ಸೂಚನೆ ತಿಳಿಸಿದೆ.

**<><*<><>*><>**

ಮುಂಬೈ ಓಪನ್ ಟೆನಿಸ್ ಟೂರ್ನಿಯಲ್ಲಿ ಭಾರತೀಯ-ಡಚ್ ಜೋಡಿಯಾದ ಪ್ರಾರ್ಥನಾ ಥೋಂಬರೆ ಮತ್ತು ಅರಿಯಾನ್ನೆ ಹಾರ್ಟೋನೊ ಇಂದು ನಡೆಯಲಿರುವ ಮಹಿಳಾ ಡಬಲ್ಸ್ ಫೈನಲ್‌ನಲ್ಲಿ ರಷ್ಯಾದ ಜೋಡಿಯಾದ ಅಮಿನಾ ಅನ್ಶಾಬ್ಬ ಮತ್ತು ಎಲೆನಾ ಪ್ರಿಡಂಕಿನಾ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೫ ಗಂಟೆಗೆ ಆರಂಭವಾಗಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ **<>*><>**